




ಶಾಸಕ ಪ್ರದೀಪ್ ಈಶ್ವರ್ ಕುಟುಂಬ ಮತದಾನ ಮಾಡಿದರು.


ಡಿಸಿಎಂ ಡಿ.ಕೆ.ಶಿವಕುಮಾರ್, ಡಿ.ಕೆ.ಸುರೇಶ್ ಮತದಾನ ಮಾಡಿದರು.


ರಾಘವೇಂದ್ರ ರಾಜ್‌ಕುಮಾರ್, ಅಶ್ವಿನಿ ಪುನೀತ್ ರಾಜ್‌ಕುಮಾರ್ ಮಾತದಾನ ಮಾಡಿದರು.


ವಿಪಕ್ಷ ನಾಯಕ ಅಶೋಕ್ ದಂಪತಿ ಮತ ಚಲಾಯಿಸಿದರು.


ಕಾಂಗ್ರೆಸ್ ಅಭ್ಯರ್ಥಿ ರಕ್ಷ ರಾಮಯ್ಯ ಮತದಾನ ಮಾಡಿದರು.

## ಸಮಾಚಾರ ಸಣ್ಣದಲ್ಲ

### ಬಿಜೆಪಿಯಿಂದ ಹಿಂದೂ ಧರ್ಮಕ್ಕೆ ಅಪಾಯ



**ಹಳಿಯಾಳ:** ಹಿಂದೂ ಧರ್ಮಕ್ಕೆ ಅಪಾಯ ಇರುವುದು ಬಿಜೆಪಿಗರಿಂದಲೇ ಹೊರತು ಬೇರಾರಿಂದಲೂ ಅಲ್ಲ ಎಂದು ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ. ಅಂಜಲಿ ನಿಂಬಾಳ್ಕರ್ ಆರೋಪಿಸಿದರು. ತಾಲೂಕಿನ ತೇರಗಾಂವ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆದ ಕಾಂಗ್ರೆಸ್ ಬಹಿರಂಗ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಬಿಜೆಪಿಗರು ತಾವೇ ಹಿಂದುತ್ವ ರಕ್ಷಣೆ ಮಾಡುತ್ತಿರುವವರು ಎನ್ನುತ್ತಾರೆ. ಮೊಘಲರು, ಬ್ರಿಟೀಷರು ಬಂದಾಗಲೂ ಹಿಂದೂ ಧರ್ಮಕ್ಕೆ ತೊಂದರೆಯಾಗಲು ಯಾರೂ ಬಿಟ್ಟಿರಲಿಲ್ಲ. ಆದರೆ ಅಂಥ ಮೋಸ ಈಗ ಬಿಜೆಪಿಯಿಂದ ಆಗುತ್ತಿದೆ ಎಂದು ಕಿಡಿಕಾರಿದರು.

### ತೇಜಸ್ವಿ ಸೂರ್ಯ ವಿರುದ್ಧ ಕೇಸ್ ದಾಖಲು



**ಬೆಂಗಳೂರು:** ಧರ್ಮದ ಆಧಾರದಲ್ಲಿ ಮತ ಯಾಚನೆ ಮಾಡಿದ ಆರೋಪದಲ್ಲಿ ಬೆಂಗಳೂರು ದಕ್ಷಿಣ ಕ್ಷೇತ್ರದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ವಿರುದ್ಧ ಚುನಾವಣಾ ಆಯೋಗದಿಂದ ಪ್ರಕರಣ ದಾಖಲಿಸಲಾಗಿದೆ. ಈ ಬಗ್ಗೆ ರಾಜ್ಯ ಮುಖ್ಯ ಚುನಾವಣಾ ಅಧಿಕಾರಿ ಮಾಹಿತಿ ನೀಡಿದ್ದಾರೆ. ಧರ್ಮದ ಆಧಾರದಲ್ಲಿ ಮತಯಾಚನೆ ಮತ್ತು ಈ ಕುರಿತು ವಿಡಿಯೊವೊಂದನ್ನು ಎಕ್ಸ್ ಖಾತೆಯಲ್ಲಿ ಹಂಚಿಕೊಂಡ ಹಿನ್ನೆಲೆಯಲ್ಲಿ ತೇಜಸ್ವಿ ಸೂರ್ಯ ವಿರುದ್ಧ ಜಯನಗರ ಠಾಣೆಯಲ್ಲಿ ಸೆಕ್ಷನ್ 123(3) ಅಡಿ ಪ್ರಕರಣ ದಾಖಲಾಗಿದೆ. ತೇಜಸ್ವಿ ಸೂರ್ಯ ಅವರು ಬೆಂಗಳೂರು ದಕ್ಷಿಣ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಯಾಗಿದ್ದು, ಮರು ಆಯ್ಕೆ ಬಯಸಿದ್ದಾರೆ. ಇವರ ವಿರುದ್ಧ ಕಾಂಗ್ರೆಸ್ ಅಭ್ಯರ್ಥಿಯಾಗಿ ಸೌಮ್ಯಾರೆಡ್ಡಿ ಅವರು ಸ್ಪರ್ಧೆಯಲ್ಲಿದ್ದಾರೆ.

### ಸಿ.ಟಿ.ರವಿ ವಿರುದ್ಧ ಪ್ರಕರಣ ದಾಖಲು



**ಬೆಂಗಳೂರು:** ಸಮುದಾಯಗಳ ಮಧ್ಯೆ ದ್ವೇಷ ಹರಡುವ ಆರೋಪದ ಮೇಲೆ ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ವಿರುದ್ಧ ಚಿಕ್ಕಮಗಳೂರು ಜಿಲ್ಲೆಯ ಬಸವನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಈ ಕುರಿತು ಮಾಹಿತಿ ನೀಡಿರುವ ಮುಖ್ಯ ಚುನಾವಣಾಧಿಕಾರಿಗಳು, ಎಕ್ಸ್ ಸಾಮಾಜಿಕ ತಾಣದಲ್ಲಿ ವಿವಿಧ ಸಮುದಾಯಗಳ ಮಡುವೆ ದ್ವೇಷಕ್ಕೆ ಕಾರಣವಾಗುವ ರೀತಿ ಪೋಸ್ಟ್ ಮಾಡಿದ್ದರ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಹೇಳಿದ್ದಾರೆ.

### ರಾಹುಲ್ ಹೋದ ಕಡೆ ಕಾಂಗ್ರೆಸ್‌ಗೆ ಸೋಲು

**ಶಿವಮೊಗ್ಗ:** ರಾಹುಲ್ ಗಾಂಧಿ ಹೋದ ಕಡೆಯಲ್ಲೆಲ್ಲಾ ಕಾಂಗ್ರೆಸ್ ಸೋತಿದೆ. ಹೀಗಾಗಿ ಅವರು ಶಿವಮೊಗ್ಗಕ್ಕೂ ಬರಲಿ ಎಂದು ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಈಶ್ವರಪ್ಪ ವ್ಯಂಗ್ಯವಾಡಿದರು. ಸುದ್ದಿಗಾರರೊಂದಿಗೆ ಮಾತನಾಡಿ, ರಾಹುಲ್ ಶಿವಮೊಗ್ಗಕ್ಕೆ ಬರಲಿ, ಕಾಂಗ್ರೆಸ್ ಸೋಲಲಿ ಎಂದು ಆಶಿಸಿದರು. ಮಧು ಬಂಗಾರಪ್ಪ ಸರಿಯಾದ ಕನ್ನಡಕ ಖರೀದಿಸಲಿ. ನನ್ನ ನಾಮಪತ್ರ ಸಲ್ಲಿಕೆ ವೇಳೆ ಸೇರಿದ್ದು ಕೇವಲ 3 ಸಾವಿರ ಜನ ಎಂದು ಹೇಳಿದ್ದಾರೆ. ಅಂದು ಮಾಧ್ಯಮಗಳಲ್ಲಿ ಬಂದಿದ್ದನ್ನು ಅವರು ಹೊಸ ಕನ್ನಡಕ ಧರಿಸಿಕೊಂಡು ನೋಡಲಿ. ಕಾಂಗ್ರೆಸ್ ಸೋಲುತ್ತದೆ ಎಂದು ನಾನಲ್ಲ, ಕಾಂಗ್ರೆಸ್ ಸೋಲುತ್ತೆ ಅಂತ ಕಾಂಗ್ರೆಸ್‌ನವರೇ ಹೇಳುತ್ತಿದ್ದಾರೆ. ಚಿತ್ರ ನಟರನ್ನು ನೋಡಿ ಮತ ಹಾಕುವ ಮತದಾರರು ನಮ್ಮ ಜಿಲ್ಲೆಯಲ್ಲಿಲ್ಲ. ನಮ್ಮಲ್ಲಿ ಪ್ರಜ್ಞಾವಂತ ಮತದಾರರಿದ್ದಾರೆ. ಕಾಂಗ್ರೆಸ್‌ನವರು ಪೂರ್ಣ ಹತಾಶೆಯಲ್ಲಿದ್ದಾರೆ ಎಂದರು.

ಬಳ್ಳಾರಿಯ ಕಾಂಗ್ರೆಸ್ ಪ್ರಚಾರ ಸಮಾವೇಶದಲ್ಲಿ ಕೇಂದ್ರ ಸರಕಾರದ ವಿರುದ್ಧ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವ್ಯಂಗ್ಯ

# ಬಿಜೆಪಿಯಿಂದ ಚೊಂಬು ಬಿಟ್ಟರೆ ಮತ್ತೇನೂ ಸಿಕ್ಕಿಲ್ಲ


**ಬಳ್ಳಾರಿ:** ಪ್ರಧಾನಿ ನರೇಂದ್ರ ಮೋದಿಯವರ ಭಾರತೀಯ ಚೊಂಬು ಪಾರ್ಟಿಯಿಂದ ಜನರಿಗೆ ಖಾಲಿ ಚೊಂಬು ಅಲ್ಲದೇ ಮತ್ತೇನೂ ಸಿಕ್ಕಿಲ್ಲ. ಕರ್ನಾಟಕ ರಾಜ್ಯ ಸರಕಾರವು ಬರ ಪರಿಹಾರ ಕೇಳಿದಾಗಲೂ ಖಾಲಿ ಚೊಂಬು ಬಿಟ್ಟರೆ ಕೇಂದ್ರ ಸರಕಾರ ಬೇರೆ ಏನೂ ಕೊಟ್ಟಿಲ್ಲ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವ್ಯಂಗ್ಯವಾಡಿದರು.

ಬಳ್ಳಾರಿಯಲ್ಲಿ ಶುಕ್ರವಾರ ನಡೆದ ಕಾಂಗ್ರೆಸ್ ಪ್ರಚಾರ ಸಮಾವೇಶದಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಸರಕಾರವು ದೇಶಕ್ಕೆ ತೆರಿಗೆ ರೂಪದಲ್ಲಿ ₹ 100 ಕೊಟ್ಟರೆ, ₹ 13 ಅಷ್ಟೇ ವಾಪಸ್ ಬರುತ್ತದೆ. ರಾಜ್ಯಕ್ಕೆ ಬೇರೆ ಬೇರೆ ಸ್ವರೂಪದಲ್ಲಿ ನಿರಂತರವಾಗಿ ಅನ್ಯಾಯವಾಗುತ್ತಿದೆ ಎಂದರು.

> **ಮೋದಿಯವರು ದೇಶದ 20ಕ್ಕೂ ಹೆಚ್ಚು ಕೋಟ್ಯಧೀಶರ 16 ಲಕ್ಷ ಕೋಟಿ ಸಾಲ ಮನ್ನಾ ಮಾಡಿದ್ದಾರೆಯೇ ಹೊರತು ರೈತರ ಸಾಲ ಮನ್ನಾ ಮಾಡಿಲ್ಲ. ನಮ್ಮ ಕಾಂಗ್ರೆಸ್ ಮತ್ತು ಇಂಡಿಯ ಮೈತ್ರಿಕೂಟವು ಅಧಿಕಾರಕ್ಕೆ ಬಂದರೆ, ನಿಶ್ಚಿತವಾಗಿ ರೈತರ ಸಾಲ ಮನ್ನಾ ಮಾಡಲಿದೆ. ಬೆಳೆಗಳಿಗೆ ವೈಜ್ಞಾನಿಕ ಕನಿಷ್ಠ ಬೆಂಬಲ ಬೆಲೆಯೂ ನಿಗದಿಪಡಿಸಲಿದೆ.**
>
> **-ರಾಹುಲ್ ಗಾಂಧಿ,** ಕಾಂಗ್ರೆಸ್ ನಾಯಕ

ಬಡವರಿಗೆ, ದುರ್ಬಲರಿಗೆ, ದಲಿತರಿಗೆ, ಅಲ್ಪಸಂಖ್ಯಾತರಿಗೆ ಸೇರಿ ಎಲ್ಲ ಸಮುದಾಯದವರಿಗೆ ಅಧಿಕಾರ ಮತ್ತು ಹಕ್ಕು ಕಲ್ಪಿಸಿರುವ ದೇಶದ ಸಂವಿಧಾನವನ್ನು ನಾಶ ಮಾಡಿಸಲು ಬಿಜೆಪಿ ಹುನ್ನಾರ ನಡೆಸಿದೆ. ಆದರೆ, ಸಂವಿಧಾನವನ್ನು ನಾಶ ಮಾಡುವಂತಹ ಶಕ್ತಿ ವಿಶ್ವದಲ್ಲಿಯೇ ಇಲ್ಲ ಎಂದರು.

ದೇಶದಲ್ಲಿ ವ್ಯಾಪಿಸಿರುವ ನಿರುದ್ಯೋಗ ಸಮಸ್ಯೆ ಕೊನೆಗಾಣಿಸಲು ಆದ್ಯತೆ ನೀಡಲಾಗುವುದು. ಪದವಿ ಮುಗಿದ ಕೂಡಲೇ ಉದ್ಯೋಗಾವಕಾಶ ಕಲ್ಪಿಸುವುದರ ಜತೆಗೆ ಅಗತ್ಯ ಕೌಶಲ ತರಬೇತಿ ನೀಡುತ್ತೇವೆ. ಯುವಜನರಿಗೆ ಅಗತ್ಯ ಆರ್ಥಿಕ ನೆರವನ್ನು ಒದಗಿಸಿ, ಬದುಕು ಕಟ್ಟಿಕೊಳ್ಳಲು ಪ್ರೋತ್ಸಾಹಿಸುತ್ತೇವೆ ಎಂದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲಾ, ಸಚಿವ ರಾದ ನಾಗೇಂದ್ರ, ಸಂತೋಷ ಲಾಡ್, ಜಮೀರ್ ಅಹಮದ್ ಖಾನ್ ಮತ್ತಿತರರು ಇದ್ದರು.



ಬಳ್ಳಾರಿಯಲ್ಲಿ ಶುಕ್ರವಾರ ನಡೆದ ಕಾಂಗ್ರೆಸ್ ಪ್ರಚಾರ ಸಮಾವೇಶದಲ್ಲಿ ಚೊಂಬು ಹಿಡಿದು ಪ್ರದರ್ಶಿಸಿದ ರಾಹುಲ್ ಗಾಂಧಿ.

### ವಿಶ್ವದ ಜೀನ್ಸ್ ರಾಜಧಾನಿ ಬಳ್ಳಾರಿ

ಬಳ್ಳಾರಿಯನ್ನು ವಿಶ್ವದ ಜೀನ್ಸ್ ರಾಜಧಾನಿ ಮಾಡುವ ಉದ್ದೇಶವಿದೆ. ಇದನ್ನು ಈ ಹಿಂದೆಯೂ ಹೇಳಿದ್ದೆ. ಇದಕ್ಕೆ ಸಂಬಂಧಿಸಿದಂತೆ ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಿದ್ದೇನೆ ಎಂದು ಕಾಂಗ್ರೆಸ್ ನಾಯಕ ರಾಹಲ್ ಗಾಂಧಿ ತಿಳಿಸಿದರು. ಬಳ್ಳಾರಿಯಲ್ಲಿ ಆದಷ್ಟು ಬೇಗ ಅಪಾರೆಲ್ ಪಾರ್ಕ್ ಬರಲಿದ್ದು, ಈ ಕ್ಷೇತ್ರದ ಜನರಿಗೆ ಒಳ್ಳೆಯದಾಗಲಿದೆ. ಯಾರೂ ಆತಂಕಪಡುವ ಅಗತ್ಯವಿಲ್ಲ. ಎಲ್ಲರಿಗೂ ನೆಮ್ಮದಿಯ ಬದುಕು ಸಿಗಲಿದೆ ಎಂದರು.


ಚುನಾವಣೆ ಪ್ರಚಾರಕ್ಕಾಗಿ ಕಲಬುರಗಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಎಐಸಿಸಿ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರನ್ನು ಕಲಬುರಗಿ ವಿಮಾನ ನಿಲ್ದಾಣದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಕೆಕೆಆರ್‌ಡಿಬಿ ಅಧ್ಯಕ್ಷ ಡಾ.ಅಜಯ್ ಸಿಂಗ್, ಶಾಸಕರಾದ ಕನೀಜ್ ಫಾತಿಮಾ, ಅಲ್ಲಮಪ್ರಭು ಪಾಟೀಲ್ ಇದ್ದರು.

ಡಿಸಿಎಂ ಡಿ.ಕೆ.ಶಿವಕುಮಾರ್ ವಿರುದ್ಧ ಎಚ್.ಡಿ.ಕುಮಾರಸ್ವಾಮಿ ಗಂಭೀರ ಆರೋಪ

# ರಾತ್ರೋರಾತ್ರಿ ಗಿಫ್ಟ್ ಕೂಪನ್, ಹಣ, ದೇವರ ಲಾಡು ಹಂಚಿಕೆ

**ರಾಮನಗರ:** ತಮ್ಮನ್ನು ರಣಹೇಡಿ ಎಂದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿಕೆಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿರುವ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ, ರಣಹೇಡಿ ನಾನಲ್ಲ, ನೇರವಾಗಿ ಚುನಾವಣೆ ಎದುರಿಸಲಾಗದೆ ರಾತ್ರೋರಾತ್ರಿ ಮತದಾರರಿಗೆ ಕ್ಯೂಆರ್ ಕೋಡ್ ಗಿಫ್ಟ್ ಕೂಪನ್, ಹಣ ಹಂಚಿಕೆ ಮಾಡುವವರು ರಣಹೇಡಿಗಳು ಎಂದು ತಿರುಗೇಟು ನೀಡಿದ್ದಾರೆ.

ಬಿಡದಿ ಸಮೀಪದ ಕೇತಿಗಾನಹಳ್ಳಿ ಮತಗಟ್ಟೆಯಲ್ಲಿ ಮತದಾನ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಅಭ್ಯರ್ಥಿ ಪರ ಮತ ಹಾಕಲು ಗಿಫ್ಟ್ ಕೂಪನ್‌ಗಳನ್ನು ವಿತರಿಸಿದ ಬಗ್ಗೆ ದಾಖಲೆಗಳನ್ನು ಪ್ರದರ್ಶಿಸಿದರಲ್ಲದೆ, ರಣಹೇಡಿ ನಾನಲ್ಲ, ಅವರು. ರಾತ್ರೋರಾತ್ರಿ ಹೋಗಿ ಕಳ್ಳಕಳ್ಳವಾಗಿ ಜನರಿಗೆ ಕ್ಯೂ ಆರ್ ಕೋಡ್ ಇರುವ ಗಿಫ್ಟ್ ಕೂಪನ್‌ಗಳನ್ನು ಹಂಚಿಕೆ ಮಾಡಿದ ವ್ಯಕ್ತಿ ರಣಹೇಡಿತನದ ಬಗ್ಗೆ ಮಾತನಾಡುತ್ತಿದ್ದಾರೆ ಎಂದು ಕಿಡಿ ಕಾರಿದರು


**ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪರ ಹಂಚಿದ್ದಾರೆ ಎನ್ನಲಾದ ಗಿಫ್ಟ್ ಕೂಪನ್‌ಗಳನ್ನು ಮಾಧ್ಯಮಗಳ ಮುಂದೆ ಪ್ರದರ್ಶಿಸುತ್ತಿರುವ ಎಚ್.ಡಿ. ಕುಮಾರಸ್ವಾಮಿ**

ಗಿಫ್ಟ್ ಕೂಪನ್ ಬಗ್ಗೆ ಚುನಾವಣಾ ಆಯೋಗಕ್ಕೆ ಈಗ ದೂರು ಕೊಟ್ಟರೂ ಏನು ಪ್ರಯೋಜನ ಇಲ್ಲ. ಹಿಂದೆ ಹಲವು ಬಾರಿ ದೂರು ಕೊಟ್ಟರೂ ಆಯೋಗ ಯಾವುದೇ ಕ್ರಮ ಕೈಗೊಂಡಿಲ್ಲ. ಈಗ ದೂರು ಕೊಟ್ಟರೆ ಏನು ಉಪಯೋಗ? ಎಂದು ಅಸಮಾಧಾನ ವ್ಯಕ್ತಪಡಿಸಿದರು. ಅಲ್ಲದೆ, ನೇರವಾಗಿ, ಮುಕ್ತವಾಗಿ ಗಿಫ್ಟ್, ಹಣ ಹಂಚುವ ವ್ಯವಸ್ಥೆಯನ್ನೇ ತನ್ನಿ. ಅವರವರ ಶಕ್ತಿ ಅನುಸಾರ ಹಣ ಹಂಚಿ ವೋಟು ಪಡೆಯುವ ವ್ಯವಸ್ಥೆ ಜಾರಿಗೆ ತನ್ನಿ. ಜಗತ್ತಿನ ಅತಿದೊಡ್ಡ ಪ್ರಜಾಪ್ರಭುತ್ವ ದೇಶವಾದ ಭಾರತದಲ್ಲಿ ಈ ರೀತಿಯ ವ್ಯವಸ್ಥೆ ಬಂದರೆ ಕಾಂಗ್ರೆಸ್‌ನವರಿಗೆ ಒಳ್ಳೆಯದು ಎಂದು ಆಯೋಗದ ಬಗ್ಗೆ ವ್ಯಂಗ್ಯವಾಡಿದರು.

> **ಹಾಸನದಲ್ಲಿ ಏನು ನಡೆಯುತ್ತಿದೆ, ಎನ್ನುವುದ ಕುರಿತು ಮೊದಲು ಉತ್ತರ ಕೊಡಲಿ. ಹಾಸನದ ಮಹಿಳೆಯರ ಅನ್ಯಾಯದ ಬಗ್ಗೆ ಉತ್ತರ ಕೊಡಲಿ. ನಂತರ ಚುನಾವಣೆ ಬಗ್ಗೆ ಮಾತನಾಡಲಿ. ನಾನು ಈಗ ಏನೂ ಹೇಳಲ್ಲ, ಫಲಿತಾಂಶ ಬರಲಿ ಮಾತನಾಡುತ್ತೇನೆ.**
>
> **- ಡಿ.ಕೆ.ಸುರೇಶ್** ಸಂಸದ

### ಜ್ಯೋತಿಷಿ ಅಣತಿಯಂತೆ ಹಣ, ಮಲೆಮಹದೇಶ್ವರ ದೇವರ ಲಾಡು

**ಜೋತಿಷಿಯೊಬ್ಬರು ಹೇಳಿದಂತೆ ಇವರು ಕನಕಪುರದಲ್ಲಿ ಹಣ, ಗಿಫ್ಟ್ ಕೂಪನ್ ಹಂಚಿದ್ದಾರೆ ಎಂದು ಆರೋಪಿಸಿದ ಕುಮಾರಸ್ವಾಮಿ, 505 ರು., ಮಲೆಮಹದೇಶ್ವರ ದೇವಾಲಯದ ಲಾಡು ಮತ್ತು ಈ ಗ್ಯಾರಂಟಿ ಕಾರ್ಡ್‌ಗಳನ್ನು ರಾತ್ರಿ ಯೆಲ್ಲಾ ಹಂಚಿದ್ದಾರೆ. ಕಾರ್ಡು ಹಂಚಿಕೆ ಮಾಡುತ್ತಿದ್ದ ಕಾಂಗ್ರೆಸ್ ಕಾರ್ಯಕರ್ತರನ್ನು ಜೆಡಿಎಸ್, ಬಿಜೆಪಿ ಕಾರ್ಯಕರ್ತರು ತಡೆದು ಜಿಲ್ಲಾಧಿಕಾರಿ ಮತ್ತು ಚುನಾವಣಾ ಅಧಿಕಾರಿಗಳ ಗಮನಕ್ಕೆ ತಂದಿದ್ದಾರೆ. ಅವರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಮುಕ್ತ, ನ್ಯಾಯ ಸಮ್ಮತ ಚುನಾವಣೆ ನಡೆಯುತ್ತಿಲ್ಲ. ಸೋಲಿನ ಭೀತಿಯಿಂದ ಕುತಂತ್ರದ ರಾಜಕಾರಣ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.**


### 85ಕ್ಕೂ ಹೆಚ್ಚು ಮಂದಿಯಿಂದ ಏಕಕಾಲಕ್ಕೆ ಮತದಾನ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಬಾದಾಮ್ ಎಂಬ ಕುಟುಂಬದ 85ಕ್ಕೂ ಹೆಚ್ಚು ಮಂದಿ ಏಕಕಾಲಕ್ಕೆ ಮತದಾನ ಮಾಡುವ ಮೂಲಕ ಎಲ್ಲರ ಗಮನ ಸೆಳೆದಿದ್ದಾರೆ. ಚಿಕ್ಕಬಳ್ಳಾಪುರ ನಗರದ ಬಾದಾಮ್ ಕುಟುಂಬದ ಸದಸ್ಯರು ಪ್ರತಿವರ್ಷವೂ ತಮ್ಮ ಹಕ್ಕನ್ನು ಕುಟುಂಬ ಸಮೇತರಾಗಿ ಬಂದು ಒಂದೇ ಬಾರಿಗೆ ಮತ ಚಲಾಯಿಸಿ ಎಲ್ಲರ ಗಮನ ಸೆಳೆಯುತ್ತಾರೆ. ಈ ಕುಟುಂಬ ಈವರೆಗೆ 18ಕ್ಕಿಂತ ಹೆಚ್ಚು ಬಾರಿ ಮತದಾನ ಮಾಡುವ ಮೂಲಕ ಮೆಚ್ಚುಗೆ ಪಡೆದುಕೊಂಡಿದೆ. ನಗರದ ಜ್ಯೂನಿಯರ್ ಕಾಲೇಜಿನ ಮತಗಟ್ಟೆಯಲ್ಲಿ ಕುಟುಂಬದ ಮತದಾರರು ಶುಕ್ರವಾರ ತಮ್ಮ ಹಕ್ಕು ಚಲಾಯಿಸಿದ್ದಾರೆ.



ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ವಿರುದ್ಧವಾಗ್ದಾಳಿ

# ಕೈ ಗ್ಯಾರಂಟಿ ಕಾರ್ಡ್‌ಗೆ ಗೌಡರ ಕಿಡಿ



**ಹೊಳೆನರಸೀಪುರ:** ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಮಹಿಳೆಯರಿಗೆ ವಾರ್ಷಿಕ 1 ಲಕ್ಷ ರು. ನೀಡಿಕೆ ಸೇರಿದಂತೆ ಕಾಂಗ್ರೆಸ್ ಗ್ಯಾರಂಟಿ ಘೋಷಣೆ ಬಗ್ಗೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಕಾರ್ಡ್ ಪ್ರದರ್ಶನ ಮಾಡಿ ಮತ್ತೊಮ್ಮೆ ಕಿಡಿ ಕಾರಿದರು.

ತಾಲೂಕಿನ ಪಡುವಲ ಹಿಪ್ಪೆಯಲ್ಲಿ ಮಾತನಾಡಿದ ಅವರು, ರಾಜ್ಯದ ಮಹಾ ಜನತೆ ಮುಂದೆ ಒಂದು ವಿಚಾರ ಪ್ರಸ್ತಾಪ ಮಾಡ್ತೇನೆ. 1 ಲಕ್ಷ ಕೊಡುತ್ತೇವೆ ಎಂದು ಖರ್ಗೆ, ರಾಹುಲ್ ಹೇಳ್ತಾರೆ, ಇವರೇನು ಸಿಎಂ ಅಥವಾ ಪ್ರಧಾನಿ ನಾ ಎಂದು ಪ್ರಶ್ನಿಸಿದರು. ಆದರೂ ಕೆಲವು ಮನೆಗಳಿಗೆ ಈ ಕಾರ್ಡ್ ಹಂಚಿದ್ದಾರೆ. ಮುಂದುವರಿದು ಸಾಲ ಮನ್ನಾ, ಜಾತಿ ಗಣತಿ ಅಂತ ಹೇಳಿದ್ದಾರೆ. ಹಿಂದೆಯೂ ಇದೇ ರೀತಿ ಕಾರ್ಡ್ ಹಂಚಿದ್ದರು ಎಂದು ದೂರಿದರು.

ಕೇರಳ, ತಮಿಳುನಾಡಿನಲ್ಲಿ ಇಲ್ಲದೆ ಕರ್ನಾಟಕದಲ್ಲೇ ಏಕೆ ಹಂಚಿಕೆ ಮಾಡಿದ್ದಾರೆ. ಸಿಎಂ ಅಥವಾ ಡಿಸಿಎಂ ಸಹಿ ಮಾಡಿದ್ರೆ ಒಪ್ಪಿ ಕೊಳ್ಳಬಹುದು. ಜನರಿಗೆ ವಂಚನೆ, ಮೋಸ ಮಾಡುವ ಕೃತ್ಯ ರಾಜ್ಯದಲ್ಲಿ ನಡೆದಿದೆ ಎಂದು ಕಾಂಗ್ರೆಸ್ ವಿರುದ್ಧ ಕಿಡಿ ಕಾರಿದರು..ಇದು ಕೀಳುಮಟ್ಟದ ರಾಜಕಾರಣ, ಬಹುಶಃ ಹಿಂದೆಂದೂ ನಡೆದಿರಲಿಲ್ಲ. ಇದೊಂದು ರಾಜ್ಯದಲ್ಲಿ ಸೋಲುತ್ತೇವೆ ಎಂದು ಜನರಿಗೆ ಮೋಸ ಮಾಡಿ ಇಂತಹ ಕಾರ್ಡ್ ಹಂಚಿದ್ದಾರೆ. ಮಾಜಿ ಪ್ರಧಾನಿಯಾಗಿ ನಾನು ಆಕ್ಷೇಪ ವ್ಯಕ್ತಪಡಿಸುತ್ತಿದ್ದೇನೆ. ನಾನು ತಪ್ಪು ಮಾತನಾಡಿದ್ರೆ ನನ್ನ ಮೇಲೆ ಯಾವ ಕೇಸು ಬೇಕಾದರೂ ಹಾಕಬಹುದು ಎಂದರು.

> **ಮತದಾನ ನಡೆದ 14 ಕ್ಷೇತ್ರದಲ್ಲಿ ಕೆಟ್ಟ ಕರಪತ್ರ ಹಂಚಿದ್ದಾರೆ. ಜನ ವಿದ್ಯಾವಂತರು ನಂಬಲ್ಲ. ಕೆಲ ಹೆಣ್ಣು ಮಕ್ಕಳು ಲಕ್ಷ ಕೊಡ್ತಾರಂತೆ ಎಂದು ನಂಬುತ್ತಾರೆ. ಹಾಸನದಲ್ಲಿ ನಡೆದಿರುವ ಬೆಳವಣಿಗೆಗಳ ಬಗ್ಗೆ ಈಗಾಗಲೇ ದೂರು ನೀಡಲಾಗಿದೆ. ದೇಶ ಉಳಿಸಿ, ಪ್ರಜಾಪ್ರಭುತ್ವ ಉಳಿಸಿ, ಸೋಲು- ಗೆಲುವು ಅಲ್ಲ, ಪ್ರಜಾಪ್ರಭುತ್ವ ಉಳಿಸಿ.**
>
> **- ಎಚ್.ಡಿ.ದೇವೇಗೌಡ,** ಮಾಜಿ ಪ್ರಧಾನಿ

### ಸುದ್ದಿಯಾದ ರಾಹುಲ್ ದ್ರಾವಿಡ್ ಮತದಾನ



**ಬೆಂಗಳೂರು:** ಭಾರತೀಯ ಕ್ರಿಕೆಟ್ ತಂಡದ ಕೋಚ್ ರಾಹುಲ್ ದ್ರಾವಿಡ್ ಮತದಾನದಲ್ಲೂ ಸುದ್ದಿಯಾಗಿದ್ದಾರೆ. ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ಮಲ್ಲೇಶ್ವರದಲ್ಲಿರುವ ಆರ್‌ಎಂವಿ ಕ್ಲಬ್‌ನ ಮತಗಟ್ಟೆಯಲ್ಲಿ ಕುಟುಂಬ ಸಮೇತರಾಗಿ ಬಂದು ಬೆಳಗ್ಗೆಯೇ ಸರತಿಯಲ್ಲಿ ನಿಂತು ಮತದಾನ ಮಾಡಿದ್ದಾರೆ. ಟೀ ಶರ್ಟ್ ಮತ್ತು ಶಾರ್ಟ್ ತೊಟ್ಟು ಸರಳವಾಗಿ ಮತಗಟ್ಟೆಗೆ ಬಂದ ಅವರು ಜನ ಸಾಮಾನ್ಯರಂತೆ ಸರತಿ ಸಾಲಿನಲ್ಲಿ ನಿಂತು ತಮ್ಮ ಹಕ್ಕು ಚಲಾಯಿಸಿದರು. ಆ ಬಳಿಕ ಸುದ್ದಿಗಾರರು ಕೇಳಿದ ಪ್ರಶ್ನೆಗಳಿಗೆ ಶುದ್ಧ ಮತ್ತು ಸ್ಪಷ್ಟವಾದ ಕನ್ನಡದಲ್ಲಿಯೇ ಉತ್ತರಿಸಿದ ಅವರು, ಮತದಾನ ಮಾಡಲು ಎಲ್ಲ ಬನ್ನಿ. ಇದೊಂದು ಒಳ್ಳೆಯ ಅವಕಾಶ. ಪ್ರಜಾಪ್ರಭುತ್ವ ಮುಂದೆ ತರುವ ಅವಕಾಶವಾಗಿದ್ದು ಬೆಂಗಳೂರು ಸೇರಿದಂತೆ ಎಲ್ಲಡೆ ದೊಡ್ಡ ಪ್ರಮಾಣದಲ್ಲಿ ಮತದಾನ ಆಗಬೇಕು ಇದು. ಬೆಂಗಳೂರಲ್ಲಿ ಜಾಸ್ತಿ ಜನ ಬರಬೇಕು. ಚುನಾವಣಾ ಆಯೋಗ ಚೆನ್ನಾಗಿ ವ್ಯವಸ್ಥೆ ಮಾಡಿದೆ. ಯುವಕರು, ಯುವತಿಯರು ಮತದಾನ ಮಾಡಲು ಮುಂದೆ ಬನ್ನಿ ಎಂದು ಕರೆ ನೀಡಿ ಸರಳತೆ ಮೆರೆದರು. ರಾಹುಲ್ ದ್ರಾವಿಡ್ ಯಾವುದೇ ಹಮ್ಮು ಬಿಮ್ಮು ಇಲ್ಲದೆ ಸರತಿಯಲ್ಲಿ ನಿಂತು ಮತದಾನ ಮಾಡಿದ ಅವರ ಫೋಟೊ, ವಿಡಿಯೊಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದು, ಸಾರ್ವಜನಿಕರ ಪ್ರಶಂಸೆಗೆ ಪಾತ್ರವಾಗಿದೆ.

### ಮತ ಚಲಾಯಿಸಿದ 109 ವರ್ಷದ ತಿಪ್ಪೀರಮ್ಮ



**ಹಿರಿಯೂರು:** ಕ್ಷೇತ್ರದಲ್ಲಿ ಶುಕ್ರವಾರ ಲೋಕಸಭೆಗೆ ನಡೆದ ಮತದಾನ ಶಾಂತಿಯುತವಾಗಿತ್ತು. ಬೆಸ್ಕಾಂ ಇಲಾಖೆ ವಸತಿ ಗೃಹದ ಆವರಣದಲ್ಲಿರುವ ಸರಕಾರಿ ಶಾಲೆಯ ಮತಗಟ್ಟೆಯಲ್ಲಿ 109 ವರ್ಷದ ತಿಪ್ಪೀರಮ್ಮ ಅವರು ತಮ್ಮ ಮೊಮ್ಮಗ ಪ್ರಮೋದ್ ಜತೆ ಹೋಗಿ ಮತ ಚಲಾಯಿಸಿ ಅಚ್ಚರಿ ಮೂಡಿಸಿದರು. ನಗರದ ವರ್ತಕ ಎಚ್.ಎಸ್.ಅಮರನಾಥ್ ಅವರ ಪುತ್ರ ಎಚ್.ಎ. ಸತ್ಯ ಹುಳಿಯಾರು ರಸ್ತೆಯಲ್ಲಿರುವ ತುಳಸಿ ಕಲ್ಯಾಣ ಮಂಟಪದಲ್ಲಿ ಶುಕ್ರವಾರ ಮಾಂಗಲ್ಯ ಧಾರಣೆ ಮುಗಿಸಿಕೊಂಡು ಮತಗಟ್ಟೆ ಸಂಖ್ಯೆ 174ಕ್ಕೆ ಬಂದು ಮತದಾನ ಮಾಡುವ ಮೂಲಕ ಗಮನ ಸೆಳೆದರು.


ನಟ ರಿಷಬ್ ಶೆಟ್ಟಿ ಮತದಾನ ಮಾಡಿದರು.


ಕುಕ್ಕಿಕಟ್ಟೆಯಲ್ಲಿ ನಟ ರಕ್ಷಿತ್ ಶೆಟ್ಟಿ ಮತದಾನ ಮಾಡಿದರು.


ರಚಿತಾರಾಮ್ ಮತದಾನ ಮಾಡಿದರು.


ನಟಿ ಅಮೂಲ್ಯ ದಂಪತಿ ತಮ್ಮ ಹಕ್ಕನ್ನು ಚಲಾಯಿಸಿದರು.


ಡಾಲಿ ಧನಂಜಯ್ ಕುಟುಂಬ ಮತದಾನ ಮಾಡಿದರು.


ಶ್ರೀಮುರಳಿ ದಂಪತಿ ಮತದಾನ ಹಕ್ಕು ಚಲಾಯಿಸಿದರು.